**All India Radio: Bangalore**
**National Bulletin In Kannada**
**21.06.2025  13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.06.2025  13.10 p.m.**

**<><><><>**

ಮುಖ್ಯಾಂಶಗಳು

1. ವಿಶ್ವದ ನಾನಾ ಭಾಗಗಳಲ್ಲಿ ೧೧ನೇ ಅಂತಾರಾಷ್ಟ್ರೀಯ ಯೋಗ ದಿನ ಆಚರಣೆ; ವಿಶಾಖಪಟ್ಟಣದಲ್ಲಿ ನೂತನ ಗಿನ್ನಿಸ್ ದಾಖಲೆ ಬರೆದ ಯೋಗ ಪ್ರದರ್ಶನ
2. ಪ್ರಸಕ್ತ ಹಣಕಾಸು ವರ್ಷದಲ್ಲಿ ದೇಶದ ಒಟ್ಟು ನೇರ ತೆರಿಗೆ ಸಂಗ್ರಹ ಶೇಕಡ ೪.೮೬ ರಷ್ಟು ಏರಿಕೆ
3. ಭಾರತದೊಂದಿಗೆ ದೀರ್ಘಾವಧಿಯ ಸಹಕಾರಕ್ಕಾಗಿ ಕ್ರಿಯಾ ಯೋಜನೆ ಶೀಘ್ರ ಅಂತಿಮ- ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್
4. ಇರಾನ್‌ನ ಪರಮಾಣು ಸೌಲಭ್ಯಗಳ ಮೇಲೆ ಇಸ್ರೇಲ್ ದಾಳಿ; ಪರಮಾಣು ಮಾಲಿನ್ಯದ ಅಪಾಯದ ಬಗ್ಗೆ 'ಐ.ಎ.ಇ.ಎ' ಆತಂಕ

<><><><>

ಇಂದು ಇಡೀ ಜಗತ್ತು ಒಂದು ರೀತಿಯ ಒತ್ತಡವನ್ನು ಎದುರಿಸುತ್ತಿದೆ. ಅಂತಹ ಪರಿಸ್ಥಿತಿಯಲ್ಲಿ ಯೋಗವು ನಮಗೆ ಶಾಂತಿಯತ್ತ ಮಾರ್ಗದರ್ಶನ ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ವಿಶಾಖಪಟ್ಟಣದಲ್ಲಿ ನಡೆದ ೧೧ ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ನೇತೃತ್ವ ವಹಿಸಿದ್ದ ಪ್ರಧಾನಿ, ಜೂನ್ ೨೧ ಅನ್ನು ಅಂತಾರಾಷ್ಟ್ರೀಯ ಯೋಗ ದಿನವೆಂದು ಗುರುತಿಸಲು ಭಾರತವು ವಿಶ್ವಸಂಸ್ಥೆಯಲ್ಲಿ ಪ್ರಸ್ತಾಪಿಸಿತು. ನಂತರ ಸಾಧ್ಯವಾದಷ್ಟು ಕಡಿಮೆ ಸಮಯದಲ್ಲಿ ವಿಶ್ವದ ೧೭೫ ದೇಶಗಳು ನಮ್ಮ ಪ್ರಸ್ತಾಪದೊಂದಿಗೆ ನಿಂತವು. ಇದು ಕೇವಲ ಒಂದು ಪ್ರಸ್ತಾವನೆಗೆ ಬೆಂಬಲವಲ್ಲ. ಇದು ಮಾನವೀಯತೆಯ ಕಲ್ಯಾಣಕ್ಕಾಗಿ ವಿಶ್ವದ ಸಾಮೂಹಿಕ ಪ್ರಯತ್ನವಾಗಿದೆ ಎಂದರು. ಯೋಗವನ್ನು ಜಗತ್ತಿನಲ್ಲಿ ಪಸರಿಸಲು, ಭಾರತವು ಆಧುನಿಕ ಸಂಶೋಧನೆಯ ಮೂಲಕ ಯೋಗ ವಿಜ್ಞಾನವನ್ನು ಮತ್ತಷ್ಟು ಬಲಪಡಿಸುತ್ತಿದೆ. ದೇಶದ ಪ್ರಮುಖ ವೈದ್ಯಕೀಯ ಸಂಸ್ಥೆಗಳು ಯೋಗದ ಕುರಿತು ಸಂಶೋಧನೆಯಲ್ಲಿ ತೊಡಗಿವೆ. ಯೋಗದ ವೈಜ್ಞಾನಿಕ

ಅಂಶವು ಆಧುನಿಕ ವೈದ್ಯಕೀಯ ವ್ಯವಸ್ಥೆಯಲ್ಲಿ ಸ್ಥಾನ ಪಡೆಯಬೇಕು ಎಂಬುದು ಭಾರತದ ಪ್ರಯತ್ನವಾಗಿದೆ ಎಂದು ಅವರು ಹೇಳಿದರು. "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬದು ಈ ವರ್ಷದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಘೋಷ ವಾಕ್ಯವಾಗಿದೆ. ವರ್ತಮಾನ ಮತ್ತು ಭವಿಷ್ಯದ ಪೀಳಿಗೆಗೆ ಸಂತೋಷದಾಯಕ ಮತ್ತು ಆರೋಗ್ಯಕರ ಭವಿಷ್ಯವನ್ನು ಖಚಿತಪಡಿಸಿಕೊಳ್ಳಲು ಜಗತ್ತು ಹೇಗೆ ಒಟ್ಟಿಗೆ ಬರುತ್ತದೆ ಎಂಬುದನ್ನು ಇದು ನೆನಪಿಸುತ್ತದೆ ಎಂದು ಪ್ರಧಾನಿ ಮೋದಿ ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೩೧ ಸೆಕೆಂಡ್ಸ್)

ವಿಶಾಖಪಟ್ಟಣಂ ಕಡಲ ತೀರದಲ್ಲಿ ಇಂದು ನಡೆದ ೧೧ ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಅದ್ಧೂರಿಯಾಗಿ ಆಚರಿಸಲಾಯಿತು. ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ಆಯುಷ್ ಖಾತೆ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್ ಉಪಸ್ಥಿತರಿದ್ದರು. ಸುಮಾರು ೩ ಲಕ್ಷ ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ನೂತನ ಗಿನ್ನಿಸ್ ವಿಶ್ವದಾಖಲೆ ನಿರ್ಮಿಸಿದೆ. ಇದಕ್ಕೂ ಮುನ್ನ ೧೧ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಗುರುತಿಸುವ ಅಂಚೆ ಚೀಟಿಯನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆ ಮಾಡಿದರು. 'ಯೋಗ ಸಂಗಮ' ಉಪಕ್ರಮದಡಿಯಲ್ಲಿ ದೇಶಾದ್ಯಂತ ೧೦ ಲಕ್ಷಕ್ಕೂ ಹೆಚ್ಚು ಸ್ಥಳಗಳಲ್ಲಿ ಯೋಗ ಕಾರ್ಯಕ್ರಮ ನಡೆಯಿತು. ನವದೆಹಲಿಯ ಐತಿಹಾಸಿಕ ಕೆಂಪು ಕೋಟೆ ಸೇರಿದಂತೆ ರಾಷ್ಟ್ರ ರಾಜಧಾನಿಯಾದ್ಯಂತ ೧೦೯ ಸ್ಥಳಗಳಲ್ಲಿ ಯೋಗ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ನವದೆಹಲಿಯ ಕರ್ತವ್ಯ ಪಥದಲ್ಲಿ ಕೇಂದ್ರ ಸಚಿವ ಜೆ.ಪಿ.ನಡ್ಡಾ, ಇಂದು ಯೋಗ ಪ್ರದರ್ಶನ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಆರೋಗ್ಯಕರ ಜೀವನಶೈಲಿಗಾಗಿ ಯೋಗವನ್ನು ಅಳವಡಿಸಿಕೊಳ್ಳುವಂತೆ ಮನವಿ ಮಾಡಿದರು. ನವದೆಹಲಿಯ ಆಕಾಶವಾಣಿ ಪ್ರಧಾನ ಕಚೇರಿಯಲ್ಲಿ ವಿಶೇಷ ಯೋಗ ಅಧಿವೇಶನವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಆಕಾಶವಾಣಿ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಾಲಿವಾಲ್ ಗೌರ್, ಎಡಿಜಿ ಎಲ್.ಮಧು ನಾಗ್, ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿ, ಯೋಗಾಸನಗಳನ್ನು ಅಭ್ಯಾಸ ಮಾಡಿದರು. ಲಡಾಖ್‌ನ ಕಾರ್ಗಿಲ್‌ನ ಖ್ರೀ ಸುಲ್ತಾನ್ ಚೂ ಕ್ರೀಡಾಂಗಣದಲ್ಲಿಂದು ಅಂತಾರಾಷ್ಟ್ರೀಯ ಯೋಗ ದಿನವನ್ನು ಉತ್ಸಾಹದಿಂದ ಆಚರಿಸಲಾಯಿತು. ಆಯುಷ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಬೆಂಗಳೂರಿನ ವಿಧಾನಸೌಧ

ಮುಂಭಾಗದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಭಾಗವಹಿಸಿದ್ದರು. ಶ್ರೀಲಂಕಾದ ಐತಿಹಾಸಿಕ ಸ್ವಾತಂತ್ರ್ಯ ಚೌಕದಲ್ಲಿ ಅಂತಾರಾಷ್ಟ್ರೀಯ ಯೋಗ ದಿನ ಆಚರಿಸಲಾಯಿತು. ಶ್ರೀಲಂಕಾ ಸರ್ಕಾರದ ಹಿರಿಯ ಸಚಿವರು, ಮಾಜಿ ಕ್ರಿಕೆಟ್ ಆಟಗಾರರು, ಭಾರತೀಯ ರಾಯಭಾರಿ ಕಚೇರಿಯ ಪ್ರತಿನಿಧಿಗಳು ಸೇರಿದಂತೆ ಯೋಗಪಟುಗಳು ಭಾಗವಹಿಸಿದ್ದರು.

<><><>

ಪ್ರಸಕ್ತ ಹಣಕಾಸು ವರ್ಷದಲ್ಲಿ ದೇಶದ ಒಟ್ಟು ನೇರ ತೆರಿಗೆ ಸಂಗ್ರಹವು, ಜೂನ್ ೧೯ ರ ವೇಳೆಗೆ ಶೇಕಡ ೪.೮೬ ರಷ್ಟು ಏರಿಕೆಯಾಗಿ, ಸುಮಾರು ೫ ಲಕ್ಷದ ೪೫ ಸಾವಿರ ಕೋಟಿ ರೂಪಾಯಿಗಳಿಗೆ ತಲುಪಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ, ಇದು ಸುಮಾರು ೫ ಲಕ್ಷದ ೧೯ ಸಾವಿರ ಕೋಟಿ ರೂಪಾಯಿಗಳಷ್ಟಿತ್ತು. ಆದಾಗ್ಯೂ, ನಿವ್ವಳ ನೇರ ತೆರಿಗೆ ಸಂಗ್ರಹವು, ಶೇಕಡ ೧.೩೯ ರಷ್ಟು ಅಲ್ಪ ಕುಸಿತ ಕಂಡಿದ್ದು, ೪ ಲಕ್ಷದ ೫೮ ಸಾವಿರ ಕೋಟಿ ರೂಪಾಯಿಗಳಿಗೆ ಇಳಿದಿದೆ. ಮರುಪಾವತಿಯಲ್ಲಿ ಶೇಕಡ ೫೮ ರಷ್ಟು ತೀವ್ರ ಏರಿಕೆಯಿಂದಾಗಿ, ಈ ಕುಸಿತ ಸಂಭವಿಸಿದೆ. ಇದು ವೇಗದ ಸಂಸ್ಕರಣೆ ಮತ್ತು ತೆರಿಗೆದಾರರ ಸೇವೆಗಳಲ್ಲಿ ಸುಧಾರಣೆಯನ್ನು ಪ್ರತಿಬಿಂಬಿಸುತ್ತದೆ.

ಆದಾಯ ತೆರಿಗೆ ಇಲಾಖೆ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, ಈ ಅವಧಿಯಲ್ಲಿ ಮುಂಗಡ ತೆರಿಗೆ ಸಂಗ್ರಹವು, ೧ ಲಕ್ಷದ ೫೫ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಾಗಿದ್ದು, ಶೇಕಡ ೩.೮೭ ರಷ್ಟು ಬೆಳವಣಿಗೆ ದಾಖಲಿಸಿದೆ. ಕಾರ್ಪೊರೇಟ್ ಮುಂಗಡ ತೆರಿಗೆ ಪಾವತಿಗಳಲ್ಲಿ ಶೇಕಡ ೫.೮೬ ರಷ್ಟು ಹೆಚ್ಚಳ ಕಂಡುಬಂದಿದೆ. ಆದರೂ ಕಾರ್ಪೊರೇಟ್ ಅಲ್ಲದ ತೆರಿಗೆದಾರರಿಂದ ಸಂಗ್ರಹವು ಶೇಕಡ ೨.೬೮ ರಷ್ಟು ಕಡಿಮೆಯಾಗಿದೆ.

<><><>

೨೦೩೦ ರವರೆಗೆ ಭಾರತದೊಂದಿಗೆ ದೀರ್ಘಾವಧಿಯ ಸಹಕಾರಕ್ಕಾಗಿ, ರಷ್ಯಾದ ಕ್ರಿಯಾ ಯೋಜನೆಯನ್ನು ಶೀಘ್ರದಲ್ಲೇ ಅಂತಿಮಗೊಳಿಸಲಾಗುವುದು ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ತಿಳಿಸಿದ್ದಾರೆ. ಸೇಂಟ್ ಪೀಟರ್ಸ್‌ಬರ್ಗ್ ಅಂತಾರಾಷ್ಟ್ರೀಯ ಆರ್ಥಿಕ ವೇದಿಕೆಯ ಸಮಗ್ರ ಅಧಿವೇಶನದಲ್ಲಿ ಮಾತನಾಡಿದ ಅವರು, ಭಾರತ ಸೇರಿದಂತೆ ತನ್ನ ಪ್ರಮುಖ ಪಾಲುದಾರರೊಂದಿಗೆ ರಷ್ಯಾ ದೀರ್ಘಾವಧಿಯ ಆರ್ಥಿಕ ಸಹಕಾರ ಯೋಜನೆಗಳನ್ನು ಮುಂದುವರಿಸುತ್ತಿದೆ ಎಂದು

ಹೇಳಿದರು. ಚೀನಾ ಮತ್ತು ರಷ್ಯಾ ಹೊಸ ಬಹು-ಧ್ರುವೀಕರಣ ವಿಶ್ವ ಕ್ರಮವನ್ನು ರೂಪಿಸುತ್ತಿವೆ ಎಂಬುದನ್ನು ಇದೇ ವೇಳೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಿರಾಕರಿಸಿದರು. ಸೇಂಟ್ ಪೀಟರ್ಸ್‌ಬರ್ಗ್ ಅಂತಾರಾಷ್ಟ್ರೀಯ ಆರ್ಥಿಕ ವೇದಿಕೆ- ಎಸ್‌ಪಿಐಇಎಫ್ ೨೦೨೫ ರ ವಿಷಯವು "ಹಂಚಿಕೆಯ ಮೌಲ್ಯಗಳು: ಬಹುಧ್ರುವೀಯ ಜಗತ್ತಿನಲ್ಲಿ ಬೆಳವಣಿಗೆಯ ಅಡಿಪಾಯ" ಎಂಬುದಾಗಿತ್ತು. ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಎಸ್‌ಪಿಐಇಎಫ್ ೨೦೨೫ ರಲ್ಲಿ ಭಾರತವನ್ನು ಪ್ರತಿನಿಧಿಸಿದರು. ಕೃತಕ ಬುದ್ಧಿಮತ್ತೆಯಲ್ಲಿ ಭಾರತದ ಪ್ರಗತಿ, ನೈತಿಕ ಮತ್ತು ಅಂತರ್ಗತ ತಾಂತ್ರಿಕ ಬೆಳವಣಿಗೆಗೆ ಅದರ ದೃಷ್ಟಿಕೋನದ ಸಚಿವರು ಪ್ರಸ್ತಾಪಿಸಿದರು.

<><><>

ಇರಾನಿನ ಪರಮಾಣು ಸೌಲಭ್ಯಗಳ ಮೇಲಿನ ಇಸ್ರೇಲ್ ದಾಳಿಯಿಂದ ಪರಮಾಣು ಮಾಲಿನ್ಯದ ಅಪಾಯದ ಬಗ್ಗೆ ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ- ಐಎಇಎ ಮಹಾನಿರ್ದೇಶಕ ರಾಫೆಲ್ ಗ್ರೋಸಿ ಎಚ್ಚರಿಸಿದ್ದಾರೆ. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ಇರಾನ್‌ನಲ್ಲಿನ ಪರಮಾಣು ತಾಣಗಳ ಮೇಲಿನ ದಾಳಿಗಳು ದೇಶದಲ್ಲಿ ಪರಮಾಣು ಸುರಕ್ಷತೆ ಮತ್ತು ಭದ್ರತೆಯಲ್ಲಿ ತೀವ್ರ ಕುಸಿತಕ್ಕೆ ಕಾರಣವಾಗಿವೆ. ಆದರೆ ಅವು ಇಲ್ಲಿಯವರೆಗೆ ಸಾರ್ವಜನಿಕರ ಮೇಲೆ ಪರಿಣಾಮ ಬೀರುವ ವಿಕಿರಣಶೀಲ ಬಿಡುಗಡೆಗೆ ಕಾರಣವಾಗಿಲ್ಲ ಎಂದು ಹೇಳಿದರು.

<><><>

ಇಸ್ರೇಲ್ ಮತ್ತು ಇರಾನ್ ನಡುವಿನ ಬಿಕ್ಕಟ್ಟಿನ ಪರಿಸ್ಥಿತಿ ಕುರಿತು ವಿಶ್ವಸಂಸ್ಥೆಯ ಭದ್ರತಾ ಮಂಡಳಿಗೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಅಂಟೋನಿಯೊ ಗುಟೆರೆಸ್ ಮಾಹಿತಿ ನೀಡಿದರು. ಇದೇ ವೇಳೆ ತುರ್ತಾಗಿ ಬಿಕ್ಕಟ್ಟು ಶಮನಗೊಳಿಸುವಂತೆ ಅವರು ಮನವಿ ಮಾಡಿದರು. ಇದು ರಾಷ್ಟ್ರಗಳ ಭವಿಷ್ಯವನ್ನು ರೂಪಿಸುವ ಕ್ಷಣವಾಗಿದೆ ಮತ್ತು ಈ ಸಂಘರ್ಷದ ವಿಸ್ತರಣೆಯು ಯಾರೂ ನಿಯಂತ್ರಿಸಲಾಗದ ಅಗ್ನಿಯನ್ನು ಹೊತ್ತಿಸಬಹುದು ಎಂದು ಅಂಟೋನಿಯೊ ಗುಟೆರೆಸ್ ಆತಂಕ ವ್ಯಕ್ತಪಡಿಸಿದರು.

<><><>

ಮಧ್ಯಪ್ರದೇಶ, ಉತ್ತರ ಪ್ರದೇಶ ಮತ್ತು ದೇಶದ ಈಶಾನ್ಯ ಭಾಗಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಪಶ್ಚಿಮ ಬಂಗಾಳ, ಛತ್ತೀಸ್‌ಗಢ, ಜಾರ್ಖಂಡ್, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಹಿಮಾಚಲ ಪ್ರದೇಶ, ಉತ್ತರಾಖಂಡ, ಪಂಜಾಬ್, ಹರಿಯಾಣ, ಚಂಡೀಗಢ, ಪಶ್ಚಿಮ ಉತ್ತರ ಪ್ರದೇಶ ಮತ್ತು ಪೂರ್ವ ರಾಜಸ್ಥಾನದಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆ ಇದೆ. ಕೊಂಕಣ ಮತ್ತು ಗೋವಾ, ಮಹಾರಾಷ್ಟ್ರ ಮತ್ತು ಗುಜರಾತ್‌ನಲ್ಲಿ ಹಗುರದಿಂದ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಕೇರಳ, ಲಕ್ಷದ್ವೀಪ, ಕರ್ನಾಟಕದ ಕರಾವಳಿ, ಆಂಧ್ರಪ್ರದೇಶದ ಕರಾವಳಿ ಮತ್ತು ತೆಲಂಗಾಣದ ಹಲವು ಸ್ಥಳಗಳಲ್ಲಿ ಇಂದು ಹಗುರ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>